# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಬಿ.ಮಹಾದೇವಯ್ಯ ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ, ಲಿಂಗಸೂಗೂರು, ರಾಯಚೂರು ಇವರ ವಿರುದ್ಧದ ಶಿಸ್ತು ಕ್ರಮ-ಅಂತಿಮ ಆದೇಶ.

ಓದಲಾಗಿದೆ:- 1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ರಾಯಚೂರು ರವರ ಪತ್ರ ಸಂಖ್ಯೆ:ಜಿಪಂರಾ:ಸಿಬ್ಬಂದಿ-1:ಸಿಸಿಎ:378/2011-12 ದಿ: 07.04.2012.
2. ಕಾರಣ ಕೇಳುವ ನೋಟೀಸು ದಿನಾಂಕ:25.10.2012.
3. ಶ್ರೀ ಬಿ. ಮಹದೇವಯ್ಯ, ಇವರ ಲಿಖಿತ ಹೇಳಿಕೆ ದಿ:16.11.2012.
4. ಸರ್ಕಾರದ ಆದೇಶದ ಸಂಖ್ಯೆ: ಗ್ರಾಅಪ 67 ವಿಸೇಬಿ 2012 ದಿ: 01.07.2013.
5. ವಿಚಾರಣಾಧಿಕಾರಿಯವರ ವರದಿ ದಿನಾಂಕ: 13.12.2013.
6. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ರಾಯಚೂರು ಇವರ ಪತ್ರ ಸಂಖ್ಯೆ: ಜಿಪಂಬ/ಸಿಬ್ಬಂದಿ(1)/ಸಿಸಿಎ/378/2015-16 ದಿ: 03.10.2015.

------

ಪ್ರಸ್ತಾವನೆ:-

ಶ್ರೀ ಬಿ. ಮಹದೇವಯ್ಯ, ಇವರು ಈ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಲಿಂಗಸೂಗೂರು, ಈ ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ 2011-12ನೇ ಸಾಲಿನಲ್ಲಿ ಎಂಜಿಎನ್‌ಆರ್‌ಇಜಿಎಸ್ ಯೋಜನೆಯ ಅನುಷ್ಠಾನದಲ್ಲಿ ಸಂಪೂರ್ಣವಾಗಿ ವಿಫಲರಾಗಿದ್ದು, ಅನಧಿಕೃತವಾಗಿ ಕಾಮಗಾರಿಗಳ ಪಟ್ಟಿ ಸಿದ್ಧಪಡಿಸಿ ಮಾರ್ಗಸೂಚಿಗಳನ್ನು ಉಲ್ಲಂಘಿಸಿ, ಅನುಮೋದನೆ ನೀಡಿ, ಅನುದಾನವನ್ನು ದುರ್ಬಳಕೆಗೆ ಅವಕಾಶ ಕಲ್ಪಿಸಲು ಹುನ್ನಾರ ಮಾಡಿರುತ್ತಾರೆಂದು ಎಂಜಿಎನ್‌ಆರ್‌ಇಜಿಎಸ್ ಯೋಜನೆಯ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಕಾರ್ಯಕ್ರಮ ಅಧಿಕಾರಿಯಾಗಿ, ಲಿಂಗಸೂಗೂರು ತಾಲ್ಲೂಕಿನ ಒಟ್ಟು 30 ಗ್ರಾಮ ಪಂಚಾಯತಿಗಳಲ್ಲಿ ಬರಗಾಲ ಕಾಮಗಾರಿಗಳ ಕ್ರಿಯಾ ಯೋಜನೆ ಎಂಬ ಶಿರೋನಾಮೆಯಡಿಯಲ್ಲಿ ಒಟ್ಟು ರೂ.2422.76 ಲಕ್ಷಗಳಿಗೆ ಅನಧಿಕೃತವಾಗಿ ಕ್ರಿಯಾ ಯೋಜನೆಗಳನ್ನು ಸಿದ್ಧಪಡಿಸಿ ಎಂಜಿಎನ್‌ಆರ್‌ಇಜಿಎಸ್ ಮಾರ್ಗಸೂಚಿ 2005 (ಪರಿಷ್ಕೃತ), 2008, 3ನೇ ಆವೃತ್ತಿ ಕಂಡಿಕೆ 8.4ನ್ನು ಉಲ್ಲಂಘಿಸಿ ಕಾಮಗಾರಿಗಳ ಅನುಷ್ಠಾನಕ್ಕೆ ಅವಕಾಶ ಕಲ್ಪಿಸಿರುವುದು ಹಾಗೂ ಲಿಂಗಸೂಗೂರು ತಾಲ್ಲೂಕಿನಲ್ಲಿ ಎಂಜಿಎನ್‌ಆರ್‌ಇಜಿಎಸ್ ಯೋಜನೆಯಲ್ಲಿ ನಿಯಮಗಳನ್ನು ಉಲ್ಲಂಘಿಸಿ ಗ್ರಾಮ ಪಂಚಾಯತಿಗಳಿಗೆ ನಿಗದಿಪಡಿಸಿದ ಕಾರ್ಮಿಕ ಮುಂಗಡಕ್ಕಿಂತ ಅನಧಿಕೃತವಾಗಿ ಹೆಚ್ಚುವರಿಯಾಗಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸಿ, ಎಂಐಎಸ್ ನಲ್ಲಿ ಅಳವಡಿಸಿರುವುದು ಇದೇ ರೀತಿಯ ಮತ್ತಿತರ ಆರೋಪಗಳ ಬಗ್ಗೆ ಶಿಸ್ತು ಕ್ರಮ ಜರುಗಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ರಾಯಚೂರು ಇವರು ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ದಿನಾಂಕ:07.04.2012ರ ಪತ್ರದಲ್ಲಿ ಪ್ರಸ್ತಾವನೆಯನ್ನು ಸಲ್ಲಿಸಿದ್ದರು.

ಪ್ರಸ್ತಾವನೆಯನ್ನು ಪರಿಶೀಲಿಸಿ, ಶ್ರೀ ಬಿ. ಮಹದೇವಯ್ಯ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಲಿಂಗಸೂಗೂರು, ಇವರು ಎಸಗಿರುವ ಕರ್ತವ್ಯಲೋಪಗಳ ಬಗ್ಗೆ ಕನಾಸೇ (ವನಿಮೇ) 1957ರ ನಿಯಮ 11 ರಡಿ ಶಿಸ್ತು ಕ್ರಮ ಜರುಗಿಸಲು ಕಾರಣ ಕೇಳುವ ನೋಟೀಸಿನೊಂದಿಗೆ ದೋಷಾರೋಪಣಾ ಪಟ್ಟಿಯ ಅನುಬಂಧ-1 ರಿಂದ 4ನ್ನು ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ಜಾರಿ ಮಾಡಲಾಗಿತ್ತು. ಆರೋಪಿತ ಅಧಿಕಾರಿಯು ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿ ಅವರ ಲಿಖಿತ ಹೇಳಿಕೆಯನ್ನು ಸಲ್ಲಿಸುತ್ತಾ, ಅವರ ವಿರುದ್ಧದ ಆರೋಪಗಳನ್ನು ನಿರಾಕರಿಸಿದ್ದು, ಹಾಗೂ ಸೇವೆಯಿಂದ ಈಗಾಗಲೇ ನಿವೃತ್ತಿ ಹೊಂದಿದ್ದು, ನಿವೃತ್ತಿ ಜೀವನವನ್ನು ಶಾಂತಿಯಿಂದ ಸಾಗಿಸಲು ಅವಕಾಶ

ಕಲ್ಪಿಸಿಕೊಡಬೇಕೆಂದು, ಅವರ ಮೇಲಿನ ಆರೋಪಗಳಿಂದ ದೋಷಮುಕ್ತಗೊಳಿಸ ಬೇಕೆಂದು ಕೋರಿರುತ್ತಾರೆ. ಆರೋಪಿತ ಅಧಿಕಾರಿಯು ಸಲ್ಲಿಸಿರುವ ವಿವರಣೆಯು ಸಮರ್ಥನೀಯವಾಗಿರುವುದಿಲ್ಲವಾದ್ದರಿಂದ ಸದರಿ ಅಧಿಕಾರಿ ವಿರುದ್ಧದ ಆರೋಪಗಳ ಸತ್ಯಾಸತ್ಯತೆಯನ್ನು ಕಂಡು ಹಿಡಿಯಲು ಕೂಲಂಕಷ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವನಿಮೆ) ನಿಯಮಾವಳಿ 1957ರ ನಿಯಮ 11ರ ಅನ್ವಯ ವಿಧಿ ವಿಧಾನದನ್ವಯ ನಡೆಸಲು ಸರ್ಕಾರವು ತೀರ್ಮಾನಿಸಿ, ಮೇಲೆ ಕ್ರಮ ಸಂಖ್ಯೆ (4) ರಲ್ಲಿ ಓದಲಾದ ದಿ:09.04.2013ರ ಆದೇಶದಲ್ಲಿ ಶ್ರೀ ಫ.ನಿ.ಗುಡ್ಡಾಕಾರ, ನಿವೃತ್ತ ನ್ಯಾಯಾಧೀಶರು, ಧಾರವಾಡ, ಇವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಲಾಗಿತ್ತು.

ವಿಚಾರಣಾಧಿಕಾರಿಯವರು ಮೇಲೆ ಕ್ರಮ ಸಂಖ್ಯೆ (5)ರಲ್ಲಿ ಓದಲಾದ ದಿನಾಂಕ 13.12.2013ರಂದು ಸರ್ಕಾರಕ್ಕೆ ವಿಚಾರಣಾ ವರದಿಯನ್ನು ಸಲ್ಲಿಸಿ, ಆಪಾದಿತರ ವಿರುದ್ಧ ಮಾಡಿರುವ ಆರೋಪಗಳು ಸಾಬೀತಾಗಿರುವುದಿಲ್ಲವೆಂದು ಅಭಿಪ್ರಾಯಪಟ್ಟಿದ್ದಾರೆ.

ಶ್ರೀ ಬಿ.ಮಹಾದೇವಯ್ಯ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಲಿಂಗಸೂಗೂರು, ರಾಯಚೂರು ಜಿಲ್ಲೆ (ಪ್ರಸ್ತುತ ನಿವೃತ್ತಿ) ಇವರ ವಿರುದ್ಧದ ಆರೋಪಗಳು, ವಿಚಾರಣಾ ವರದಿ ಹಾಗೂ ಪ್ರಕರಣಕ್ಕೆ ಸಂಬಂಧಿಸಿದಂತೆ ಲಭ್ಯವಿರುವ ದಾಖಲೆಗಳನ್ನು ಸರ್ಕಾರವು ಪರಿಶೀಲಿಸಿದೆ.

ಆಪಾದಿತ ಅಧಿಕಾರಿಯ ವಿರುದ್ಧ ಒಟ್ಟು 11 ಆರೋಪಗಳನ್ನು ಮಾಡಲಾಗಿದೆ. ಆಪಾದಿತ ಅಧಿಕಾರಿಯು ಈಗಾಗಲೇ ಸೇವೆಯಿಂದ ನಿವೃತ್ತಿ ಹೊಂದಿರುವ ಕಾರಣ ಸದರಿಯವರ ವಿರುದ್ಧದ ಆರೋಪಗಳ ಬಗ್ಗೆ ವಿವರವಾಗಿ ಪರಿಶೀಲಿಸಲಾಗಿ;

ಆರೋಪ: 1 ಮತ್ತು 2ರಲ್ಲಿ ಲಿಂಗಸೂಗೂರು ತಾಲ್ಲೂಕಿನ 30 ಗ್ರಾಮ ಪಂಚಾಯಿತಿಗಳಿಗೆ ಹೆಚ್ಚುವರಿಯಾಗಿ ಕ್ರಿಯಾ ಯೋಜನೆಗಳನ್ನು ತಯಾರಿಸಿ ನಿಯಮ ಬಾಹಿರವಾಗಿ ಎಂ.ಐ.ಎಸ್.ನಲ್ಲಿ ಅಳವಡಿಸಲು ಸಿಬ್ಬಂದಿ ಮೇಲೆ ಒತ್ತಡ ಹೇರಿದ್ದು, ಸರ್ಕಾರದ ಅನುದಾನದ ದುರುಪಯೋಗಕ್ಕೆ ಪ್ರಯತ್ನಿಸಿರುತ್ತಾರೆಂದು ಆರೋಪಿಸಲಾಗಿದೆ. ಆದರೆ ನಿರ್ದಿಷ್ಟವಾಗಿ ಯಾವುದೇ ಹಣ ದುರುಪಯೋಗವಾಗಿರುವ ಬಗ್ಗೆ ಪ್ರಸ್ತಾಪಿಸಿರುವುದಿಲ್ಲ.

ಆರೋಪ: 3 ಮತ್ತು 4ರಲ್ಲಿ ನಿಗಧಿಪಡಿಸಿದ ಮೊತ್ತಕ್ಕೆ ಹೆಚ್ಚುವರಿ ಕಾಮಗಾರಿಗಳಿಗೆ ಬಜೆಟನ್ನು ತಯಾರಿಸಿ, ಕಾಮಗಾರಿಗಳನ್ನು ಎಂ.ಐ.ಎಸ್.ನಲ್ಲಿ ಅಳವಡಿಸುವ ಮೂಲಕ ಯೋಜನೆಯ ಮಾರ್ಗಸೂಚಿಗಳನ್ನು ಉಲ್ಲಂಘನೆ ಮಾಡಿರುವ ಬಗ್ಗೆ ಆರೋಪ.

ಆರೋಪ: 5 ಮತ್ತು 6ರಲ್ಲಿ ಗ್ರಾಮ ಪಂಚಾಯಿತಿಗಳಿಗೆ ನಿಗಧಿಪಡಿಸಿದ ಕ್ರಿಯಾ ಯೋಜನೆಗಳಿಗಿಂತ ಹೆಚ್ಚುವರಿ ಯೋಜನೆಗಳನ್ನು ಸಿದ್ಧಪಡಿಸಿ, ಮಾರ್ಗಸೂಚಿಗಳನ್ನು ಉಲ್ಲಂಘಿಸಿರುವ ಬಗ್ಗೆ.

ಆರೋಪ: 7 ಮತ್ತು 10ರಲ್ಲಿ ಸದರಿಯವರು ಕಾರ್ಯನಿರ್ವಾಹಕ ಅಧಿಕಾರಿಯಾಗಿ ಕಾರ್ಯನಿರ್ವಹಿಸಿದ ಸಂದರ್ಭದಲ್ಲಿ ತಮ್ಮ ಅಧೀನ ಸಿಬ್ಬಂದಿಯ ಜೊತೆ ಅನುಚಿತವಾಗಿ ವರ್ತಿಸಿರುವ ಬಗ್ಗೆ, ಮೇಲಾಧಿಕಾರಿಗಳ ಪೂರ್ವಾನುಮತಿಯನ್ನು ಪಡೆಯದೇ ಕೇಂದ್ರಸ್ಥಾನದಿಂದ ತೆರಳಿರುವ ಬಗ್ಗೆ, ಮಾಹಿತಿ ಆಯೋಗಕ್ಕೆ ಹಾಜರಾದ ಬಗ್ಗೆ, ದಾಖಲೆಗಳನ್ನು ಸಲ್ಲಿಸದೇ ಇರುವ ಬಗ್ಗೆ ಹಾಗೂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಇವರಿಗೆ ಬರೆದ ಪತ್ರದ ಪ್ರತಿಯನ್ನು ಸರ್ಕಾರದ ಪ್ರಧಾನ ಕಾರ್ಯದರ್ಶಿರವರಿಗೆ ಸಲ್ಲಿಸಿರುವ ಬಗ್ಗೆ ಇಂತಹ ಲಘು ಸ್ವರೂಪದ ಲೋಪಗಳ ಕುರಿತು ಪ್ರಸ್ತಾಪಿಸಲಾಗಿದೆ.

ಆರೋಪ: 11ರಲ್ಲಿ ಇಂದಿರಾ ಆವಾಜ್ ಯೋಜನೆಯಡಿಯಲ್ಲಿ ನಿರ್ಮಿಸಲಾದ ಮನೆಗಳ ಪೈಕಿ ಫಲಾನುಭವಿಯಾದ ಶ್ರೀ ಶಿವಪ್ಪನವರು ಮನೆ ನಿರ್ಮಿಸದೇ ಇದ್ದರೂ ಸಹ ಮನೆ ನಿರ್ಮಿಸಿದಂತೆ ಕ್ರಿಯಾ ಯೋಜನೆಯನ್ನು ತಯಾರಿಸಿ, ಹಣ ದುರುಪಯೋಗಪಡಿಸಿಕೊಳ್ಳಲಾಗಿದೆ ಎಂದು ಆರೋಪಿಸಲಾಗಿದೆ.

ಮೇಲಿನ ಆರೋಪಗಳ ಪೈಕಿ ಆರೋಪ 1 ರಿಂದ 6ಕ್ಕೆ ಸಂಬಂಧಿಸಿದಂತೆ, ಇಲಾಖಾ ವಿಚಾರಣೆಯ ಸಂದರ್ಭದಲ್ಲಿ ಆಪಾದಿತ ಅಧಿಕಾರಿಯುವ ಸಲ್ಲಿಸಿರುವ ವಿವರಣೆಯಲ್ಲಿ ತಾವು ಗ್ರಾಮ ಪಂಚಾಯಿತಿಗಳ ಬೇಡಿಕೆಗೆ ಅನುಗುಣವಾಗಿ ಕ್ರಿಯಾ ಯೋಜನೆಗಳಿಗೆ ಮಂಜೂರಾತಿಯನ್ನು ನೀಡಿದ್ದು, ಅವುಗಳನ್ನು ನಿಯಮಾನುಸಾರ ಅನುಷ್ಠಾನಗೊಳಿಸಿದ್ದು, ಯಾವುದೇ ನಿಯಮ/ಮಾರ್ಗಸೂಚಿಗಳನ್ನು ಉಲ್ಲಂಘಿಸಿರುವುದಿಲ್ಲವೆಂದು, ಹಣ ದುರುಪಯೋಗಪಡಿಸಿಕೊಂಡಿರುವುದಿಲ್ಲ ಎಂಬ ಮಾಹಿತಿಯನ್ನು ನೀಡಿರುತ್ತಾರೆ.

ಅಲ್ಲದೆ, ಅನುಮೋದಿತ ಕ್ರಿಯಾ ಯೋಜನೆಗಳಿಗಿಂತ ಹೆಚ್ಚುವರಿಯಾಗಿ ಎಂ.ಐ.ಎಸ್.ನಲ್ಲಿ ಅಳವಡಿಸಿದ ಕಾಮಗಾರಿಗಳ ಮಾಹಿತಿಗಳನ್ನು ತೆಗೆದು ಹಾಕಲು ತಾವು ತಮ್ಮ ಅಧೀನ ಸಿಬ್ಬಂದಿಗಳಿಗೆ ಮೌಖಿಕವಾಗಿ ಸೂಚನೆಗಳನ್ನು ನೀಡಿ ಅದನ್ನು ಸರಿಪಡಿಸಿರುವುದಾಗಿ ತಿಳಿಸಿರುತ್ತಾರೆ. ಉಳಿದಂತೆ ಆರೋಪ 7 ರಿಂದ 10ಕ್ಕೆ ಸಂಬಂಧಿಸಿದಂತೆ ತಾವು ತೆಗೆದುಕೊಂಡ ಕ್ರಮದ ಬಗ್ಗೆ ಮಾಹಿತಿಯನ್ನು ವಿಚಾರಣಾಧಿಕಾರಿಗಳ ಗಮನಕ್ಕೆ ತಂದಿರುತ್ತಾರೆ.

ಆರೋಪ 11ಕ್ಕೆ ಸಂಬಂಧಿಸಿದಂತೆ ಇಂದಿರಾ ಆವಾಜ್ ಯೋಜನೆಯಡಿ ಸರ್ಕಾರದ ಅನುದಾನವನ್ನು ಬಳಸಿ ಮನೆ ನಿರ್ಮಿಸಿಕೊಳ್ಳದ ಫಲಾನುಭವಿಗಳಿಂದ ರೂ.40,000/-ಗಳನ್ನು ವಸೂಲು ಮಾಡಿ ಸರ್ಕಾರಕ್ಕೆ ಜಮಾ ಮಾಡಿದ್ದು, ದಿನಾಂಕ 07.12.2012ರಂದು ವಿಚಾರಣಾಧಿಕಾರಿಗಳು ಮಾಡಿದ ವಿಚಾರಣೆಯ ಸಮಯದಲ್ಲಿ ಅದರ ಪ್ರತಿಯನ್ನು ವಿಚಾರಣಾಧಿಕಾರಿಗಳ ಮುಂದೆ ಹಾಜರುಪಡಿಸಿರುತ್ತಾರೆ.

ವಿಚಾರಣಾಧಿಕಾರಿಗಳ ಮುಂದೆ ಒಟ್ಟು 16 ಸಾಕ್ಷಿದಾರರುಗಳು ಸಾಕ್ಷಿ ಹೇಳಿಕೆಗಳನ್ನು ನೀಡಿದ್ದು, ಆಪಾದಿತ ಅಧಿಕಾರಿಯು ಯಾವುದೇ ರೀತಿಯ ಅನುಚಿತ ವರ್ತನೆ ಎಸಗಿರುವುದಿಲ್ಲವೆಂದು, ಹೆಚ್ಚುವರಿ ಕ್ರಿಯಾ ಯೋಜನೆಗಳನ್ನು ನಂತರದಲ್ಲಿ ಕೈಬಿಡಲಾಗಿದೆಯೆಂದು, ಯಾವುದೇ ದುರ್ನಡತೆ ಎಸಗಿರುವುದಿಲ್ಲವೆಂದು ಮತ್ತು ಹಣ ಬಿಡುಗಡೆಯಾಗಿರುವುದಿಲ್ಲವೆಂದು ಹಾಗೂ ದುರುಪಯೋಗವಾಗಿರು ವುದಿಲ್ಲವೆಂದು, ಅಲ್ಲದೆ, ಆರೋಪ 11ಕ್ಕೆ ಸಂಬಂಧಿಸಿದಂತೆ ಇಂದಿರಾ ಆವಾಜ್ ಯೋಜನೆಯಡಿ ಫಲಾನುಭವಿಗಳು ಮನೆ ನಿರ್ಮಿಸಿಕೊಳ್ಳದೇ ಇದ್ದಲ್ಲಿ ಸದರಿ ಮೊತ್ತವನ್ನು ವಸೂಲು ಮಾಡಲು ಪತ್ರ ಬರೆದಿರುವುದರ ಬಗ್ಗೆಯೂ ಸಹ ವಿಚಾರಣಾಧಿಕಾರಿಗಳಿಗೆ ಸಾಕ್ಷ್ಯಾಧಾರಗಳನ್ನು ನೀಡಿದ್ದು, ಒಟ್ಟಾರೆ ಸಾಕ್ಷಿಗಳ ಹೇಳಿಕೆಗಳು ಆಪಾದಿತರ ಪರವಾಗಿಯೇ ಇರುವುದನ್ನು ಗಮನಿಸಲಾಗಿದೆ.

ಸರ್ಕಾರವು ಪ್ರಕರಣವನ್ನು ಕೂಲಂಕಷವಾಗಿ ಪರಿಶೀಲಿಸಿ, ಇಲಾಖಾ ವಿಚಾರಣೆಗೆ ಲಭ್ಯಪಡಿಸಿದ ದಾಖಲೆಗಳು ಮತ್ತು ಸಾಕ್ಷಿಗಳ ಪರಿಶೀಲನೆಯನ್ವಯ ಅಪಾಧಿತ ಅಧಿಕಾರಿಯು ಗಂಭೀರ ಸ್ವರೂಪದ ದುರ್ನಡತೆಯನ್ನು ಎಸಗಿರುವ ಯಾವುದೇ ಅಂಶವು ಇಲಾಖಾ ವಿಚಾರಣೆಯಲ್ಲಿ ಸಾಬೀತಾಗಿರುವುದಿಲ್ಲ. ಈಗಾಗಲೇ ಅಪಾಧಿತ ಅಧಿಕಾರಿಯು ಸೇವೆಯಿಂದ ನಿವೃತ್ತಿ ಹೊಂದಿ ದೀರ್ಘಾವಧಿ ಸಂದಿರುವ ಕಾರಣ ಮತ್ತು ಪ್ರಸ್ತುತ ಪ್ರಕರಣದಲ್ಲಿ ಆರೋಪಿತರ ವಿರುದ್ಧ ಯಾವುದೇ ಆರ್ಥಿಕ ನಷ್ಟ ಮತ್ತು ಅಕ್ರಮಗಳು ನಡೆದಿರುವಂತಹ ಆರೋಪಗಳು ಇಲ್ಲದ ಹಿನ್ನಲೆಯಲ್ಲಿ ವಿಚಾರಣಾ ವರದಿಯನ್ನು ಒಪ್ಪಿ, ಶ್ರೀ

ಬಿ.ಮಹಾದೇವಯ್ಯ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಲಿಂಗಸೂಗೂರು ಇವರ ವಿರುದ್ಧದ ಶಿಸ್ತು ಕ್ರಮವನ್ನು ಕೈಬಿಡಲು ಸರ್ಕಾರವು ನಿರ್ಧರಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 67 ವಿಸೇಬಿ 2012 ದಿನಾಂಕ: 27.01.2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಸರ್ಕಾರವು ಶ್ರೀ ಬಿ.ಮಹಾದೇವಯ್ಯ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಲಿಂಗಸೂಗೂರು, ರಾಯಚೂರು ಜಿಲ್ಲೆ (ಪ್ರಸ್ತುತ ನಿವೃತ್ತಿ) ಇವರಿಗೆ ಕ್ರಮಾಂಕ ಗ್ರಾಅಪ 67 ವಿಸೇಬಿ 2012 ದಿನಾಂಕ:25-10-2012ರ ನೋಟೀಸಿನ ಜೊತೆ ಜಾರಿ ಮಾಡಿರುವ ಆರೋಪಗಳಿಂದ ದೋಷಮುಕ್ತಗೊಳಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

T. Manju 27.1.16

(ಟಿ. ಮಂಜುನಾಥ್)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇ-ಬಿ & ಸಿ)(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಗೆ:-

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ತೋಟಗಾರಿಕೆ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ರಾಯಚೂರು.
4. ಸರ್ಕಾರದ ಅಧೀನ ಕಾರ್ಯದರ್ಶಿ, ತೋಟಗಾರಿಕೆ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು. ಬಹುಮಹಡಿ ಕಟ್ಟಡ,ಬೆಂಗಳೂರು.
5. ಶ್ರೀ ಬಿ.ಮಹಾದೇವಯ್ಯ, ಕಾರ್ಯನಿರ್ವಾಹಕ ಅಧಿಕಾರಿ(ನಿವೃತ್ತಿ), # 8/ಎ, 4ನೇ ಮುಖ್ಯರಸ್ತೆ, 10ನೇ ಕ್ರಾಸ್, ಲಲಿತಮಹಲ್ ನಗರ, ಮೈಸೂರು-570028.

27/1/16

**ಪ್ರತಿಯನ್ನು ಮಾಹಿತಿಗಾಗಿ:-**

1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ(ಪಂ.ರಾಜ್)/ ಉಪ ಕಾರ್ಯದರ್ಶಿ (ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಇವರ ಆಪ್ತ ಶಾಖೆಗೆ.
2) ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ.
3) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.